**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ. ತಳವಾರ್ ಸಾಬಣ್ಣ ಇವರು ನಿಯಮ-72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ**

**ವಿಷಯ:** ರಾಜ್ಯ ಸರ್ಕಾರದ ವಿಶ್ವವಿದ್ಯಾಲಯಗಳು ಅಧೋಗತಿಗೆ ಸಾಗುತ್ತಿರುವುದು ಮತ್ತು ಉನ್ನತ ಶಿಕ್ಷಣದ ಗುಣಮಟ್ಟ ಕುಂಠಿತಗೊಂಡಿರುವ ಕುರಿತು.

ರಾಜ್ಯದ ಗ್ರಾಮೀಣ ಭಾಗದಿಂದ ಉನ್ನತ ಶಿಕ್ಷಣ ಪಡೆಯಲು ಆಗಮಿಸುತ್ತಿರುವ ಯುವಕ/ಯುವತಿಯರಿಗೆ ದಾರಿದೀಪವಾಗಬೇಕಾಗಿದ್ದ ರಾಜ್ಯ ಸರ್ಕಾರದ ವಿಶ್ವವಿದ್ಯಾಲಯಗಳು ಗೊಂದಲದ ಗೂಡುಗಳಾಗಿ, ಸಮಸ್ಯೆಗಳ ತಾಣವಾಗಿ ಅಧೋಗತಿ ದಾರಿಗೆ ಸಾಗುತ್ತಿರುವುದು ತೀರಾ ಶೋಚನೀಯ ಸ್ಥಿತಿಯಾಗಿದೆ. ಮೂಲಭೂತ ಸೌಕರ್ಯಗಳ ಕೊರತೆ, ಪ್ರಾಧ್ಯಾಪಕರುಗಳ ಕೊರತೆ, ಜಾತಿಯತೆ, ಭ್ರಷ್ಟಾಚಾರ, ಉದ್ಯೋಗ ಮುಖಿ ಕೋರ್ಸ್‌ಗಳ ಕೊರತೆ ಹೀಗೆ ಹಲವಾರು ಸಮಸ್ಯೆಗಳಿಂದ ಬಳಲುತ್ತಿರುವ ವಿಶ್ವವಿದ್ಯಾಲಯಗಳು ಇಂದು ಭವಿಷ್ಯ ಅರಿಸಿಕೊಂಡು ಬರುವ ಗ್ರಾಮೀಣ ಪ್ರದೇಶದ ಬಡ ಯುವಕ/ಯುವತಿಯರಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ವಿಫಲವಾಗಿವೆ. ಈ ಹಿನ್ನಲೆಯಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳ ಆಧಾರ ಸ್ತಂಭವಾಗಬೇಕಿದ್ದ ರಾಜ್ಯ ಸರ್ಕಾರದ ವಿಶ್ವವಿದ್ಯಾಲಯಗಳ ಸಮಸ್ಯೆಗಳು, ಆಧೋಗತಿ ಸ್ಥಿತಿ ಮತ್ತು ಕುಸಿಯುತ್ತಿರುವ ಗುಣಮಟ್ಟದ ಕುರಿತು ಉನ್ನತ ಶಿಕ್ಷಣ ಮಂತ್ರಿಯವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:-**

ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳು ಯು.ಜಿ.ಸಿ. ಹಾಗೂ ರಾಜ್ಯ ಸರ್ಕಾರದ ನೀತಿ-ನಿಯಮ ಮತ್ತು ವಿಶ್ವವಿದ್ಯಾಲಯಗಳು ಸ್ಥಾಪನೆಗೊಂಡ ಅಧಿನಿಯಮಗಳಡಿ ಕಾರ್ಯನಿರ್ವಹಿಸುತ್ತಿದ್ದು, ಅದರನ್ವಯ ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಗಳು ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಅವಶ್ಯಕತೆಗನುಗುಣವಾಗಿ ಶಿಕ್ಷಣಕ್ಕೆ ಸಂಬಂಧಿಸಿದಂತೆ ಸೂಕ್ತ ಮಾಹಿತಿ / ಮಾರ್ಗದರ್ಶನವನ್ನು ಕಾಲಕಾಲಕ್ಕೆ ನೀಡಲಾಗುತ್ತಿದೆ. ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳು ಮತ್ತು ಅವುಗಳಡಿ ಬರುವ ಕಾಲೇಜುಗಳು ನಿಗದಿತ ಅವಧಿಯೊಳಗೆ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲು ಅನುಕೂಲವಾಗುವಂತೆ ಪ್ರತಿ ಶೈಕ್ಷಣಿಕ ಸಾಲಿಗೂ ಶೈಕ್ಷಣಿಕ ವೇಳಾಪಟ್ಟಿಯನ್ನು ಸರ್ಕಾರದಿಂದ ಜಾರಿಗೊಳಿಸಿ ಆದೇಶಿಸಲಾಗುತ್ತದೆ. ಅದರನ್ವಯ 2026-27ನೇ ಶೈಕ್ಷಣಿಕ ಸಾಲಿನಿಂದ 2030-31ನೇ ಶೈಕ್ಷಣಿಕ ಸಾಲಿನವರೆಗೆ ಶೈಕ್ಷಣಿಕ ಚಟುವಟಿಕೆಗಳನ್ನು ನಿಗದಿತ ಸಮಯದೊಳಗಾಗಿ ನಡೆಸಲು ಒಟ್ಟಿಗೆ ಐದು ವರ್ಷಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ಹೊರಡಿಸುವುದರ ಮೂಲಕ ವಿದ್ಯಾರ್ಥಿಗಳ ತರಗತಿ, ಪರೀಕ್ಷೆ ಮತ್ತು ಫಲಿತಾಂಶವನ್ನೂ ಒಳಗೊಂಡಂತೆ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಶೈಕ್ಷಣಿಕ ಚಟುವಟಿಕೆಗಳಲ್ಲಿ ಏಕರೂಪತೆಯನ್ನು ಸಾಧಿಸಲಾಗಿದೆ.

ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯಡಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲಾಗಿರುತ್ತದೆ. ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳ ಆರ್ಥಿಕ ಸ್ಥಿತಿ-ಗತಿಗಳನ್ನು ಪರಾಮರ್ಶಿಸಲು ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ಆರ್ಥಿಕ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ವಿಶ್ವವಿದ್ಯಾಲಯಗಳ ಸಂಶೋಧನೆ, ಮೂಲಸೌಲಭ್ಯ, ಅನುದಾನ, ಪಿಂಚಣಿ ಹಾಗೂ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ಅನುಕೂಲವಾಗುವಂತೆ ಅಗತ್ಯ ಹುದ್ದೆಗಳ ನೇಮಕಾತಿ ಹಾಗೂ ಇತ್ಯಾದಿ ಅವಶ್ಯಕ ವಿಷಯಗಳ ಕುರಿತು ಹಲವು ಸಭೆಗಳನ್ನು ನಡೆಸಿದ್ದು, ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಬಲವರ್ಧನೆಗೊಳಿಸುವ ನಿಟ್ಟಿನಲ್ಲಿ ಕ್ರಮವಹಿಸಲಾಗುತ್ತಿದೆ.

ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳು ಮತ್ತು ಕಾಲೇಜು ಶಿಕ್ಷಣ ಇಲಾಖೆಯಡಿ ಬರುವ ಕಾಲೇಜುಗಳಿಗೆ ಕೇಂದ್ರ ಪುರಸ್ಕೃತ ಯೋಜನೆಯಾದ ರೂಸಾ ಯೋಜನೆ 1.0 ಮತ್ತು 2.0 ಪಿ.ಎಂ.-ಉಷಾ ಯೋಜನೆಯಡಿ 13 ವಿಶ್ವವಿದ್ಯಾಲಯಗಳು ಮತ್ತು 126 ಕಾಲೇಜುಗಳು ಅನುದಾನ ಪಡೆಯುತ್ತಿದ್ದು, ಈ ಯೋಜನೆಯಡಿ ಒಟ್ಟು ರೂ.728.00 ಕೋಟಿಗಳು ಮಂಜೂರಾಗಿರುತ್ತದೆ.

ಕೇಂದ್ರ ಪುರಸ್ಕೃತ ಪಿ.ಎಂ-ಉಷಾ ಯೋಜನೆಯು 2023-24 ರಿಂದ ಪ್ರಾರಂಭವಾಗಿದ್ದು, ಸದರಿ ಯೋಜನೆಯಡಿ 07 ಸರ್ಕಾರಿ ವಿಶ್ವವಿದ್ಯಾಲಯಗಳು ಮತ್ತು 21 ಸರ್ಕಾರಿ ಕಾಲೇಜುಗಳು ಹಾಗೂ ಮೂರು ಜಿಲ್ಲೆಗಳು ಸೇರಿದಂತೆ ಒಟ್ಟು ರೂ.443.00 ಕೋಟಿಗಳ ಅನುದಾನವು ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಮಂಜೂರಾಗಿರುತ್ತದೆ.

ಕೇಂದ್ರ ಸರ್ಕಾರದ ರೂಸಾ ಯೋಜನೆ ಮತ್ತು ಪಿ.ಎಂ.-ಉಷಾ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಸಹಯೋಗದೊಂದಿಗೆ 60:40 ಅನುಪಾತದಲ್ಲಿ ಅನುದಾನ ಮಂಜೂರಾಗಿದ್ದು, ವಿಶೇಷವಾಗಿ ಮೂಲಭೂತ ಸೌಕರ್ಯಗಳನ್ನು ವಿಶ್ವವಿದ್ಯಾಲಯಗಳಲ್ಲಿ ಮತ್ತು ಕಾಲೇಜುಗಳಲ್ಲಿ ಹೆಚ್ಚಿಸಲು ಉಪಯೋಗಿಸಲಾಗುತ್ತಿದೆ.

ಕೇಂದ್ರ ಸರ್ಕಾರದ ಮಾರ್ಗಸೂಚಿ ಹಾಗೂ ರಾಜ್ಯ ಸರ್ಕಾರದ ನೀತಿಯಂತೆ ರಾಜ್ಯದಲ್ಲಿ ಕಲಿಕೆ ಮತ್ತು ಕೌಶಲ್ಯ, ಕಲಿಕೆಯ ಜೊತೆಗೆ ಕೌಶಲ್ಯ, ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ, ಅಮೃತ ಮುನ್ನಡೆ ಹಾಗೂ Karnataka German Multi Skills Development Center (KGMSD) ಅಡಿಯಲ್ಲಿ ಬೆಂಗಳೂರು, ಕಲಬುರಗಿ, ಬೆಳಗಾವಿ, ಮಂಗಳೂರು, ಹುಬ್ಬಳ್ಳಿ, ಮೈಸೂರು, ಗೌರಿಬಿದನೂರು, ಕಾರ್ಕಳ ಇಲ್ಲಿ ಕಲಿಕಾ ಕೇಂದ್ರಗಳನ್ನು ಸ್ಥಾಪಿಸಲಾಗಿರುತ್ತದೆ.

ರಾಜ್ಯದಲ್ಲಿ ವಿಶ್ವವಿದ್ಯಾಲಯಗಳು ಸಂಶೋಧನೆ, ಪಠ್ಯಕ್ರಮ, ಉದ್ಯೋಗಾವಕಾಶ ಮತ್ತು ಡಿಜಿಟಲ್ ಕಲಿಕೆಗಳನ್ನು ಉತ್ತೇಜಿಸಿ ಎಲ್ಲಾ ಪ್ರದೇಶಗಳು ಮತ್ತು ಸಮುದಾಯಗಳಿಗೆ ತಲುಪುವಂತೆ ಮಾಡಲು ಮತ್ತು ಆರ್ಥಿಕವಾಗಿ ಹಿಂದುಳಿದ ಕುಟುಂಬದ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಪ್ರೋತ್ಸಾಹಕ್ಕಾಗಿ ರಾಜ್ಯ ಸರ್ಕಾರದಿಂದ ಹಲವಾರು ಯೋಜನೆಗಳನ್ನು ಕೈಗೊಳ್ಳಲಾಗಿದೆ.

ಉದ್ಯೋಗ ಮತ್ತು ಉದ್ಯೋಗಾಧಾರಿತ ಶಿಕ್ಷಣವನ್ನು ನೀಡಲು ಅಜೀಂ ಪ್ರೇಮ್‌ಜೀ, ಎಚ್‌ಪಿ, ಟೊಯೊಟೊ, ಇನ್‌ಫೋಸಿಸ್, ಮುಂತಾದ ಕೈಗಾರಿಕೋದ್ಯಮ ಸಂಸ್ಥೆಗಳೊಂದಿಗೆ MoU ಮೂಲಕ ಒಡಂಬಡಿಕೆ ಮಾಡಿಕೊಂಡು ಶಿಕ್ಷಣವನ್ನು ನೀಡಲಾಗುತ್ತಿದೆ. ಉದ್ಯೋಗ ಸೃಷ್ಟಿಸುವಂತಹ ಬಿಸಿಎ ಮತ್ತು ಬಿಬಿಎ ಕೋರ್ಸ್‌ಗಳನ್ನು ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿದ್ದು, ಇಂತಹ ಯೋಜನೆಗಳು ಉದ್ಯೋಗಮುಖಿಯಾಗಿ ಕಾರ್ಯನಿರ್ವಹಿಸಲು ಸಹಾಯಕವಾಗುತ್ತಿದ್ದು, ಗ್ರಾಮೀಣ ಪ್ರದೇಶದ ಬಡ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉದ್ಯೋಗವಕಾಶವನ್ನು ಕಲ್ಪಿಸಲು ಸಹಕಾರಿಯಾಗಿದೆ.

**ಸಂಖ್ಯೆ: ಇಡಿ/359/ಯುಎನ್‌ಇ/2025**

**(ಡಾ|| ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಇಲಾಖೆ,